ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ  ದಿನಾಂಕ : DATE : 14/2/21

# ನಿರ್ಮಲಾ ಬಜೆಟ್ ಐತಿಹಾಸಿಕ: ಯಡಿಯೂರಪ್ಪ ಮೆಚ್ಚುಗೆ

ಬೆಂಗಳೂರು: ಕೇಂದ್ರ ಸರ್ಕಾರದ ಬಜೆಟ್ ಐತಿಹಾಸಿಕ ಬಜೆಟ್ ಆಗಿದ್ದು, ರಾಜ್ಯ ಸರ್ಕಾರವು ಸ್ವಾಗತಿಸುತ್ತದೆ. ಕೇಂದ್ರ ಬಜೆಟ್ ದೇಶದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಕೃಷಿ ಉತ್ಪಾದನೆ ಪ್ರಮಾಣ ಹೆಚ್ಚಳ, ಮೂಲಸೌಕರ್ಯ ಹೆಚ್ಚಳ, ಆರೋಗ್ಯ ಕ್ಷೇತ್ರದಲ್ಲಿ ಸೌಕರ್ಯ ವೃದ್ಧಿಗೆ ಇದು ಪೂರಕವಾಗಲಿದೆ. ಅಂತಾರಾಷ್ಟ್ರೀಯ ಹಣಕಾಸು ನಿಧಿಯೂ ಭಾರತ ಅತಿ ವೇಗದಿಂದ ಅಭಿವೃದ್ಧಿ ಸಾಧಿಸುವ ವಿಶ್ವಾಸವನ್ನು ವ್ಯಕ್ತಪಡಿಸಿದೆ. ಇದೇ ಕಾರಣಕ್ಕಾಗಿ ಮೂಲಸೌಕರ್ಯಕ್ಕೆ ಗರಿಷ್ಠ ಒತ್ತು ನೀಡಲಾಗಿದೆ. ಕೃಷಿ ಮೂಲಸೌಕರ್ಯಕ್ಕೆ 1 ಲಕ್ಷ ಕೋಟಿ ರು. ವೆಚ್ಚ ಮಾಡಲಾಗಿದೆ. ವಿವಿಧ ಕ್ಷೇತ್ರಗಳ ಮೂಲಸೌಕರ್ಯ ವೃದ್ಧಿಗೆ ಮುಂದಿನ 5 ವರ್ಷದಲ್ಲಿ 100 ಲಕ್ಷ ಕೋಟಿ ರು. ವೆಚ್ಚ ಮಾಡಲಾಗುವುದೆಂದಿದ್ದಾರೆ.

ಭಾರತವು ವಿಶ್ವದ ಆರೋಗ್ಯದ ಕೇಂದ್ರವಾಗುತ್ತಾ ಮುನ್ನಡೆಯಲಿದೆ. ಕಳೆದ ಸಾಲಿನಲ್ಲಿ 94 ಸಾವಿರ ಕೋಟಿ ರು. ಬದಲು ಈ ಬಾರಿ ಈ ಕ್ಷೇತ್ರದ ಹೂಡಿಕೆಯನ್ನು 2,23,000 ಕೋಟಿ ರು. ಹೆಚ್ಚಿಸಲಾಗಿದೆ. ಇದರಿಂದ ಬೃಹತ್ ಆರೋಗ್ಯ ಮೂಲಸೌಕರ್ಯ ಕೇಂದ್ರವಾಗಿ ಭಾರತ ಬೆಳೆಯಲಿದೆ. 2021–22ನೇ ಸಾಲಿನ ಕೇಂದ್ರ ಬಜೆಟ್‌ನಡಿ ಕೇಂದ್ರ ಸರ್ಕಾರವು 34,83,236 ಕೋಟಿ ರು.ಗಳನ್ನು ವಿವಿಧ ಕ್ಷೇತ್ರಗಳಡಿ ವ್ಯಯಿಸಲು ಉದ್ದೇಶಿಸಿದೆ. ಹಣಕಾಸಿನ ಕೊರತೆ ಇದ್ದರೂ ಮೂಲಭೂತ ಸೌಕರ್ಯಕ್ಕೆ ಹೆಚ್ಚು ಬಂಡವಾಳ ಹೂಡುವ ಕಾರಣ ಸರಕು ಸೇವಾ ಕ್ಷೇತ್ರ, ಆರೋಗ್ಯ ಸೇರಿದಂತೆ ವಿವಿಧ ರಂಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಸೃಷ್ಟಿಯಾಗಲಿವೆ. ಇದು ದೇಶದ ಸಮಗ್ರ ಅಭಿವೃದ್ಧಿ ಪೂರಕವಾಗಿದೆ ಎಂದಿದ್ದಾರೆ.